(ಸದನವು 10.31 ಕ್ಕೆ ಪ್ರಾರಂಭವಾಯಿತು)

ಡಾ॥ ಶರಣಪ್ರಕಾಶ್ ರುದ್ರಪ್ಪ ಪಾಟೀಲ್ : ಮಾನ್ಯ ಅಧ್ಯಕ್ಷರೇ, ನನಗೆ ಒಂದು ವಿಷಯ ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡಬೇಕು.

(ಡಾ॥ ಶರಣಪ್ರಕಾಶ್ ರುದ್ರಪ್ಪ ಪಾಟೀಲ್‌ರವರು ಬಾವಿಯಲ್ಲಿ ಬಂದು ಧರಣಿ ಪ್ರಾರಂಭಿಸಿದರು)

ಶ್ರೀ ಹೆಚ್.ಡಿ. ರೇವಣ್ಣ : ಅಧ್ಯಕ್ಷರೆ, ಈ ವಿಷಯವನ್ನು ನಿಯಮ 60ರಲ್ಲಿ ಚರ್ಚೆ ಮಾಡುವುದಕ್ಕೆ ಅವಕಾಶ ಕೊಡಬೇಕು.

ಅಧ್ಯಕ್ಷರು : ಮಾನ್ಯ ರೇವಣ್ಣನವರೇ, ಇದನ್ನು ಪ್ರಶ್ನೋತ್ತರ ಆದ ಮೇಲೆ ತೆಗೆದುಕೊಳ್ಳೋಣ.

(ಡಾ॥ ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್‌ರವರು ಧರಣಿ ಮುಕ್ತಾಯಗೊಳಿಸಿ ತಮ್ಮ ಸ್ಥಾನಕ್ಕೆ ವಾಪಸ್ಸಾದರು)

ಶ್ರೀ ಹೆಚ್.ಡಿ. ರೇವಣ್ಣ : ಡಿನೋಟಿಫಿಕೇಷನ್ ಮಾಡಬೇಕು, ಇದು ಯಾವ ತರಹ ಎಂದು ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತರಬೇಕಾಗಿದೆ. ಇವತ್ತು ಎಲ್ಲಾ ಪತ್ರಿಕೆಗಳಲ್ಲಿ ಮುಖ್ಯಪುಟದಲ್ಲಿ ಬಂದಿದೆ. 800 ಎಕೆರೆ ಒಂದೇ ಸಾರಿ ಡಿನೋಟಿಫಿಕೇಷನ್ ಮಾಡುತ್ತಾರೆ. ಇದರ ಬಗ್ಗೆ ದಯಮಾಡಿ ನನಗೆ ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ಪ್ರಶ್ನೋತ್ತರ ಆದ ಮೇಲೆ ತೆಗೆದುಕೊಳ್ಳೋಣ. ಈಗ ಪ್ರಶ್ನೇತ್ತರ ಪ್ರಾರಂಭ ಮಾಡೋಣ.

1. <u>ಪ್ರಶ್ನೋತ್ತರ</u>

ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು